5) ಆ ಪೈಕಿ ಸರ್ಕಾರದ ಭೂಮಿ ಎಷ್ಟು?

6) ಭೂಮಾಲೀಕರಿಗೆ ನೀಡುವ ಭೂ ಪರಿಹಾರದ ಮೊತ್ತ ಎಷ್ಟು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

1) ಹೌದು.

2) ಮೆ; ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್ ಲಿಮಿಟೆಡ್ (ನೈಸಿಲ್

3) ಸುಮಾರು ರೂ. 2,000 ಕೋಟಿಗಳು

4) 20.193 ಎಕರೆಗಳನ್ನು ವಶಪಡಿಸಿಕೊಳ್ಳುವ ಉದ್ದೇಶ ಹೊಂದಿದೆ.

5) 5,688 ಎಕರೆಗಳು

6) ಸಂಬಂಧಿಸಿದ ಜಿಲ್ಲಾಧಿಕಾರಿಗಳು ಇದಕ್ಕಾಗಿ ರಚಿಸಿರುವ ಪರಿಹಾರ ಸಮಿತಿಗಳಲ್ಲಿ ಪರಿಹಾರದ ಮೊತ್ತವನ್ನು ನಿರ್ಧರಿಸುವರು.

ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳಿಂದ ಜಮಾ ಆಗುವ ಶುಗರ್ ಕೇನ್ ಸೆಸ್‌ಫಂಡ್ ಬಗ್ಗೆ

3084 - ಶ್ರೀ ಆತ್ಮಾನಂದ ಎಂ.ಎಸ್ (ಮಂಡ್ಯ) : ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಒಟ್ಟು ಸಕ್ಕರೆ ಕಾರ್ಖಾನೆಗಳೆಷ್ಟು?

ಆ) ಈ ಸಕ್ಕರೆ ಕಾರ್ಖಾನೆಗಳ ಉತ್ಪಾದನಾ ಸಾಮರ್ಥ್ಯವೆಷ್ಟು?

ಇ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳು ಈವರೆಗೆ ಅರೆದಿರುವ ಕಬ್ಬಿನ ಪ್ರಮಾಣವೆಷ್ಟು?

ಈ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳಿಂದ ಶುಗರ್‌ಕೇನ್ ಸೆಸ್‌ಫಂಡ್ ರೂಪದಲ್ಲಿ ಸರ್ಕಾರಕ್ಕೆ ವಾರ್ಷಿಕವಾಗಿ ಎಷ್ಟು ಹಣ ಜಮಾ ಆಗಿರುತ್ತದೆ?

ಉ) ಶುಗರ್‌ಕೇನ್ ಸೆಸ್‌ಫಂಡನ್ನು ಯಾವ ಕಾರ್ಯಗಳಿಗೆ ವಿನಿಯೋಗಿಸಲಾಗುತ್ತಿದೆ?

ಶ್ರೀ ಎ. ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) ರಾಜ್ಯದಲ್ಲಿ ಒಟ್ಟು 35 ಸಕ್ಕರೆ ಕಾರ್ಖಾನೆಗಳು ಇರುತ್ತವೆ.

ಆ) 35 ಸಕ್ಕರೆ ಕಾರ್ಖಾನೆಗಳಿಂದ ದಿನವಹಿ 66500 ಮೆ.ಟನ್ ಕಬ್ಬು ನುರಿಸುವ ಸಾಮರ್ಥ್ಯ ಹೊಂದಿದೆ.

ಇ) 180 ದಿನಗಳ ಒಂದು ಹಂಗಾಮಿನಲ್ಲಿ ಈ ಕಾರ್ಖಾನೆಗಳು 140 ಲಕ್ಷ ಟನ್ ಕಬ್ಬು ನುರಿಸಿರುತ್ತವೆ. ಇದರಿಂದ ಸುಮಾರು 13.5 ಲಕ್ಷ ಟನ್ ಸಕ್ಕರೆ ಉತ್ಪಾದಿಸಿದೆ.

ಈ) ಲಭ್ಯವಿರುವ ಮಾಹಿತಿಯಂತೆ ರಾಜ್ಯದ ಸಕ್ಕರೆ ಕಾರ್ಖಾನೆಗಳಿಂದ ಕಳೆದ 4 ಹಂಗಾಮುಗಳಲ್ಲಿ ಈ ಕೆಳಕಂಡಂತೆ ಶುಗರ್ ಸೆಸ್‌ಫಂಡ್ ಸರ್ಕಾರಕ್ಕೆ ಜಮಾವಾಗಿರುತ್ತದೆ.

1996-97	-	ರೂ. 650.39
1997-98	-	ರೂ. 354.54 ಲಕ್ಷ
1998-99	-	ರೂ. 671.12 ಲಕ್ಷ
1999-2000	-	ರೂ. 290.13 ಲಕ್ಷ

ಉ) ಕಾರ್ಖಾನೆಯ ವ್ಯಾಪ್ತಿಯಲ್ಲಿನ ರಸ್ತೆ ಅಭಿವೃದ್ಧಿಗಾಗಿ ವಿನಿಯೋಗಿಸಲಾಗುತ್ತದೆ.

ಶ್ರೀರಂಗಪಟ್ಟಣದ ದರಿಯಾದೌಲತ್‌ನಲ್ಲಿ ಧ್ವನಿ ಮತ್ತು ಬೆಳಕಿನ ಸೌಲಭ್ಯ

3086 - ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ಪ್ರವಾಸೋದ್ಯಮ ಹಾಗೂ ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಐತಿಹಾಸಿಕ ಸ್ಥಳ ಶ್ರೀರಂಗಪಟ್ಟಣದ ದರಿಯಾ ದೌಲತ್‌ನಲ್ಲಿ ಪ್ರವಾಸಿಗರಿಗಾಗಿ ಧ್ವನಿ ಮತ್ತು ಬೆಳಕಿನ ಕಾರ್ಯಕ್ರಮದ ಸೌಲಭ್ಯ ಇಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೇ?

2) ಹಾಗಿದ್ದಲ್ಲಿ ದರಿಯಾ ದೌಲತ್‌ನಲ್ಲಿ ಧ್ವನಿ ಮತ್ತು ಬೆಳಕಿನ ವ್ಯವಸ್ಥೆ ಅಳವಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

3) ಶ್ರೀರಂಗಪಟ್ಟಣದಲ್ಲಿ ಪ್ರವಾಸಿ ಮಾಹಿತಿ ಕೇಂದ್ರ ಇದೆಯೇ?

4) ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು?

ಶ್ರೀ ಆರ್. ರೋಷನ್ ಬೇಗ್ (ಪ್ರವಾಸೋದ್ಯಮ ಹಾಗೂ ಹಜ್ ಸಚಿವರು) :

1) ಹೌದು.

2) ದರಿಯಾ ದೌಲತ್‌ನಲ್ಲಿ ಧ್ವನಿ ಮತ್ತು ಬೆಳಕಿನ ಯೋಜನೆಯನ್ನು ಭಾರತ ಸರ್ಕಾರದ ನೆರವಿನಿಂದ ಕೈಗೊಳ್ಳಲಾಗುವುದು.

3) ಇದೆ.

4) ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರವು ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಂಡಿದೆ.

I. ಪ್ರಾರಂಭಗೊಂಡಿರುವ ಯೋಜನೆಗಳು :

ಅ) ನದಿತೀರದ ಕುಟೀರಗಳು, ಶ್ರೀರಂಗ ಪಟ್ಟಣ

ಆ) ಉಪಹಾರ ಗೃಹ ಮತ್ತು ಸ್ವಾಗತ ಕೇಂದ್ರ, ಶ್ರೀರಂಗಪಟ್ಟಣ